RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA<br>Part-IVA | ಬೆಂಗಳೂರು, ಬುಧವಾರ, ನವೆಂಬರ್ ೩೦, ೨೦೧೬ (ಮಾರ್ಗಶಿರ ೯, ಶಕ ವರ್ಷ ೧೯೩೮)<br>Bengaluru, Wednesday, November 30, 2016 (Margashira 9, Shaka Varsha 1938) | ಸಂ. ೧೩೧೧<br>No. 1311 |
|---|---|---|

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

**ಕರ್ನಾಟಕ ಪಂಚಾಯತ್ ರಾಜ್(ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ) (ತಿದ್ದುಪಡಿ) ನಿಯಮಗಳು, 2016**

**ಅಧಿಸೂಚನೆ**

**ಸಂಖ್ಯೆ:ಗ್ರಾಅಪ 198 ಜಿಪಸ 2016, ದಿನಾಂಕ:30-11-2016**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (ಕರ್ನಾಟಕ 1993ರ ಅಧಿನಿಯಮ ಸಂಖ್ಯೆ 14)ರ ಪ್ರಕರಣ 310ರೊಡನೆ ಓದಿಕೊಂಡಂತೆ, ಪ್ರಕರಣ 311ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ) ನಿಯಮಗಳು 1996ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಕೆಳಕಂಡ ಕರಡು ತಿದ್ದುಪಡಿ ನಿಯಮಗಳನ್ನು ಸದರಿ ಅಧಿನಿಯಮದ 311ನೇ ಪ್ರಕರಣದ ಉಪ-ಪ್ರಕರಣ (1)ರಡಿಯಲ್ಲಿ ಅಗತ್ಯಪಡಿಸಲಾದಂತೆ ದಿನಾಂಕ:26-09-2016ರ ಕರ್ನಾಟಕ ವಿಶೇಷ ರಾಜ್ಯ ಪತ್ರದ ಭಾಗ-IV-A, ನಂ.1131ರಲ್ಲಿ ಅಧಿಸೂಚನೆ ಸಂಖ್ಯೆ: ಗ್ರಾಅಪ 198 ಜಿಪಸ 2016, ದಿನಾಂಕ:26-09-2016ರ ಮೂಲಕ ಪ್ರಕಟಿಸಿದ್ದು, ಅದರಿಂದ ಬಾಧಿತರಾಗಬಹುದಾದ ಸಂಭವಿರುವ ವ್ಯಕ್ತಿಗಳಿಂದ ಹದಿನೈದು ದಿನಗಳೊಳಗಾಗಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ಪ್ರಕಟಿಸಿರುವುದರಿಂದ;

ಮತ್ತು ಸದರಿ ರಾಜ್ಯಪತ್ರವು ಸಾರ್ವಜನಿಕರಿಗೆ ದಿನಾಂಕ:26-09-2016ರಂದು ಲಭ್ಯವಾಗುವಂತೆ ಮಾಡಿರುವುದರಿಂದ;

ಈಗ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ, ಪ್ರಕರಣ 310ರೊಡನೆ ಓದಿಕೊಂಡಂತೆ ಪ್ರಕರಣ 311ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ) ನಿಯಮಗಳು, 1996ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಕೆಳಕಂಡ ತಿದ್ದುಪಡಿ ನಿಯಮಗಳನ್ನು ರಚಿಸುತ್ತದೆ, ಎಂದರೆ;-

## ನಿಯಮಗಳು

1. **ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳ ಚುನಾವಣೆ) (ತಿದ್ದುಪಡಿ) ನಿಯಮಗಳು, 2016 ಎಂದು ಕರೆಯತಕ್ಕದ್ದು.

    (2) ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಿತವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ಶೀರ್ಷಿಕೆಯ ತಿದ್ದುಪಡಿ.-** ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳ ಚುನಾವಣೆ) ನಿಯಮಗಳು, 1996ರ (ಇಲ್ಲಿ ಇನ್ನು ಮುಂದೆ ಮೂಲ ನಿಯಮಗಳು ಎಂದು ಉಲ್ಲೇಖಿಸಲಾಗುವುದು) ಶೀರ್ಷಿಕೆಯಲ್ಲಿ "ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳ ಚುನಾವಣೆ)" ಎಂಬ ಪದಗಳಿಗೆ ಮತ್ತು ಆವರಣಗಳಿಗೆ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ)" ಎಂಬ ಪದಗಳು ಮತ್ತು ಆವರಣಗಳನ್ನು ಪ್ರತಿಯೋಜಿಸತಕ್ಕದ್ದು.

3. **ನಿಯಮ 1ರ ತಿದ್ದುಪಡಿ.–** ಮೂಲ ನಿಯಮಗಳ ನಿಯಮ 1ರ, ಉಪ ನಿಯಮ(1)ರಲ್ಲಿ, "ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳ ಚುನಾವಣೆ)" ಪದಗಳಿಗೆ ಮತ್ತು ಆವರಣಗಳಿಗೆ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ)" ಎಂಬ ಪದಗಳು ಮತ್ತು ಆವರಣಗಳನ್ನು ಪ್ರತಿಯೋಜಿಸತಕ್ಕದ್ದು.

4. **ನಿಯಮ 2ರ ತಿದ್ದುಪಡಿ.–** ಮೂಲ ನಿಯಮಗಳ ನಿಯಮ 2ರಲ್ಲಿ.–

(i) ಖಂಡ (1)ಕ್ಕೆ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು ಅಂದರೆ.–

"(1) "ಅಧಿನಿಯಮ" ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ 1993, (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14);"

(ii) ಖಂಡ (4)ರಲ್ಲಿ "ಜಿಲ್ಲಾ ಪಂಚಾಯತ್‌ನ" ಎಂಬ ಪದಗಳಿಗೆ "ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ನ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

5. **ನಿಯಮ 4ರ ತಿದ್ದುಪಡಿ.–** ಮೂಲ ನಿಯಮಗಳ, ನಿಯಮ 4ರಲ್ಲಿ "ಜಿಲ್ಲಾ ಪಂಚಾಯಿತಿ" ಎಂಬ ಪದಗಳ ತರುವಾಯ "ಮತ್ತು ತಾಲ್ಲೂಕು ಪಂಚಾಯಿತಿಯ" ಎಂಬ ಪದಗಳನ್ನು ಸೇರಿಸತಕ್ಕದ್ದು.

6. **ನಿಯಮ 8ರ ತಿದ್ದುಪಡಿ.–** ಮೂಲ ನಿಯಮಗಳ, ನಿಯಮ 8ರಲ್ಲಿ "ಜಿಲ್ಲಾ ಪಂಚಾಯತ್," ಎಂಬ ಪದಗಳ ಮತ್ತು ಅಲ್ಪವಿರಾಮ ಚಿಹ್ನೆಗೆ "ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

7. **ನಿಯಮ 22ರ ತಿದ್ದುಪಡಿ.–** ಮೂಲ ನಿಯಮಗಳ, ನಿಯಮ 22ರಲ್ಲಿ "ಜಿಲ್ಲಾ ಪಂಚಾಯಿತಿ" ಎಂಬ ಪದಗಳಿಗೆ "ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯತಿ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಪಿ.ದೇವಸಹಾಯಂ**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

---

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು:-50